# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ರವಿ ಪಾಟೀಲ್ ಹೆಲ್ತ್ ಅಂಡ್ ಎಜುಕೇಷನ್ ಸೊಸೈಟೀಸ್, ಇವರ ಡಾ|| ರವಿ ಪಾಟೀಲ್ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ಹೊನಗಾ, ಬೆಳಗಾವಿ ಇವರಿಗೆ 2021-22ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಬಿ.ಎ.ಎಂ.ಎಸ್. ಪದವಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ:
1. ಭಾರತ ಸರ್ಕಾರದ ವೈದ್ಯಕೀಯ ಮೌಲ್ಯಮಾಪನ ಮತ್ತು ರೇಟಿಂಗ್ ಬೋರ್ಡ್, NCISM ಇವರ ಪತ್ರ ಸಂಖ್ಯೆ: Ref. No.4-168/2021-AY, Dated: 04.02.2022.
2. ಪ್ರಾಂಶುಪಾಲರು, ಡಾ|| ರವಿ ಪಾಟೀಲ್ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ಬೆಳಗಾವಿ ಇವರ ದಿನಾಂಕ:07.02.2022ರ ಮನವಿ
3. ಆಯುಕ್ತರು, ಆಯುಷ್ ಇಲಾಖೆ, ಇವರ ಪತ್ರ ಸಂಖ್ಯೆ:ಆಯುಷ್/11/ಅ(2)//2021-22, ದಿನಾಂಕ:17.02.2022

******

## ಪ್ರಸ್ತಾವನೆ:

ಮೇಲೆ ಓದಲಾದ ಕ್ರ.ಸಂ (1)ರ ಪತ್ರದಲ್ಲಿ ಭಾರತ ಸರ್ಕಾರದ ಆಯುಷ್ ಮಂತ್ರಾಲಯದ ವೈದ್ಯಕೀಯ ಮೌಲ್ಯಮಾಪನ ಮತ್ತು ರೇಟಿಂಗ್ ಬೋರ್ಡ್, NCISM ಕಾಯ್ದೆ 2020ರ ಸೆಕ್ಷನ್ 29ರ ಪ್ರಕಾರ ಶ್ರೀ ರವಿ ಪಾಟೀಲ್ ಹೆಲ್ತ್ ಅಂಡ್ ಎಜುಕೇಷನ್ ಸೊಸೈಟೀಸ್, ಡಾ|| ರವಿ ಪಾಟೀಲ್ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ಬೆಳಗಾವಿ ಸಂಸ್ಥೆಗೆ 60 ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ 2021-22ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಬಿ.ಎ.ಎಂ.ಎಸ್ ಪದವಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡಿರುತ್ತದೆ.

ಮೇಲೆ ಓದಲಾದ ಕ್ರ.ಸಂ (2)ರ ಪತ್ರದಲ್ಲಿ ಪ್ರಾಂಶುಪಾಲರು, ಶ್ರೀ ರವಿ ಪಾಟೀಲ್ ಹೆಲ್ತ್ ಅಂಡ್ ಎಜುಕೇಷನ್ ಸೊಸೈಟೀಸ್, ಡಾ|| ರವಿ ಪಾಟೀಲ್ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ಬೆಳಗಾವಿ ಇವರು ಭಾರತ ಸರ್ಕಾರದ NCISMರವರು ಸದರಿ ಸಂಸ್ಥೆಗೆ 2021-22ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶ ಮಿತಿಯಲ್ಲಿ ಬಿ.ಎ.ಎಂ.ಎಸ್ ಪದವಿ ಕೋರ್ಸ್‌ನ್ನು ಪ್ರಾರಂಭಿಸಲು ಅನುಮತಿ ನೀಡಿದ್ದು ಅದರಂತೆ ನಿರಾಕ್ಷೇಪಣಾ ಪತ್ರವನ್ನು ನೀಡುವಂತೆ ಮನವಿಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಸಂ (3) ರ ಪತ್ರದಲ್ಲಿ ಆಯುಕ್ತರು , ಆಯುಷ್ ಇಲಾಖೆ, ಬೆಂಗಳೂರು ಇವರು ಭಾರತ ಸರ್ಕಾರದ National Commission for Indian System of Medicine (NCISM), ನವದೆಹಲಿ ಇವರು 2021-22ನೇ ಶೈಕ್ಷಣಿಕ ಸಾಲಿನಿಂದ ಶ್ರೀ ರವಿ ಪಾಟೀಲ್ ಹೆಲ್ತ್ ಅಂಡ್ ಎಜುಕೇಷನ್ ಸೊಸೈಟೀಸ್, ಡಾ|| ರವಿ ಪಾಟೀಲ್ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ಹೊನಗ ತಾಲೂಕು, ಬೆಳಗಾವಿ ಇಲ್ಲಿ 2021-22ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಬಿ.ಎ.ಎಂ.ಎಸ್ ಪದವಿ ಕೋರ್ಸ್‌ನ್ನು 60 ವಿದ್ಯಾರ್ಥಿಗಳ ಪ್ರವೇಶಕ್ಕೆ NCISMನವರು ಅನುಮತಿ ನೀಡಿರುವ ಹಿನ್ನಲೆಯಲ್ಲಿ ಸದರಿ ಸಂಸ್ಥೆಯವರು ತಮ್ಮ ಸಂಸ್ಥೆಗೆ ಹೊಂದಿಕೊಂಡಿರುವ ಆಸ್ಪತ್ರೆಯನ್ನು ಎಲ್-4 ಬೋಧನಾ ಆಸ್ಪತ್ರೆ ಎಂದು ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಕಾಯ್ದೆ ಮತ್ತು ನಿಯಮಗಳ ಅಡಿಯಲ್ಲಿ ನೊಂದಣಿ ಪಡೆದು ಪ್ರಮಾಣ ಪತ್ರ ಸಲ್ಲಿಸುವ ಷರತ್ತಿಗೆ ಒಳಪಟ್ಟು 2021-22ನೇ ಶೈಕ್ಷಣಿಕ ಸಾಲಿನಿಂದ ಅನ್ವಯಿಸುವಂತೆ ವಿದ್ಯಾರ್ಥಿಗಳ ಪ್ರವೇಶಾತಿಗೆ ಅನುಮತಿ ನೀಡಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಆಯುಷ್ ಆಯುಕ್ತರ ಪ್ರಸ್ತಾವನೆ ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಶ್ರೀ ರವಿ ಪಾಟೀಲ್ ಹೆಲ್ತ್ ಅಂಡ್ ಎಜುಕೇಷನ್ ಸೊಸೈಟೀಸ್,

...2

ಡಾ|| ರವಿ ಪಾಟೀಲ್ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ಬೆಳಗಾವಿ ಇಲ್ಲಿ 2021-22ನೇ ಶೈಕ್ಷಣಿಕ ಸಾಲಿನಿಂದ 60 (ಆರವತ್ತು) ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ ಬಿ.ಎ.ಎಂ.ಎಸ್ ಪದವಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡಲು ನಿರ್ಧರಿಸಿದೆ, ಆದುದರಿಂದ, ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 119 ಪಿಟಿಡಿ 2020, ಬೆಂಗಳೂರು, ದಿನಾಂಕ: 30.04.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2021-22ನೇ ಶೈಕ್ಷಣಿಕ ಸಾಲಿನಿಂದ ಶ್ರೀ ರವಿ ಪಾಟೀಲ್ ಹೆಲ್ತ್ ಅಂಡ್ ಎಜುಕೇಷನ್ ಸೊಸೈಟೀಸ್, ಡಾ|| ರವಿ ಪಾಟೀಲ್ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ಹೊನಗಾ , ಬೆಳಗಾವಿ, ಇಲ್ಲಿ 60 (ಅರವತ್ತು) ವಿದ್ಯಾರ್ಥಿಗಳ ಪ್ರವೇಶ ಮಿತಿಯಲ್ಲಿ ಹೊಸದಾಗಿ ಬಿ.ಎ.ಎಂ.ಎಸ್ ಪದವಿ ಕೋರ್ಸ್ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಲಾಗಿದೆ.

1. ಕಾಲೇಜನ್ನು ಪ್ರಾರಂಭಿಸುವ ಮುನ್ನ ಅಗತ್ಯವಿರುವ ಮೂಲ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.
2. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು.
3. ಭಾರತ ಸರ್ಕಾರ/ಎನ್.ಸಿ.ಐ.ಎಸ್.ಎಂ. ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
4. ಕೇಂದ್ರ/ ರಾಜ್ಯ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.
5. ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
6. ಸರ್ಕಾರದ ಪೂರ್ವಾನುಮತಿಯಿಲ್ಲದೆ ಸಂಸ್ಥೆಯ ಹೆಸರು / ವಿಳಾಸ / ಟ್ರಸ್ಟ್‌ನ್ನು ಬದಲಾಯಿಸಬಾರದು.
7. ಸರ್ಕಾರ ವಿಧಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದಲ್ಲಿ ಸಂಯೋಜನೆ/ ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.
8. ಸಂಸ್ಥೆಗೆ ಹೊಂದಿಕೊಂಡಿರುವ ಆಸ್ಪತ್ರೆಯನ್ನು ಎಲ್-4 ಬೋಧನಾ ಆಸ್ಪತ್ರೆ ಎಂದು ಕೆ.ಪಿ.ಎಂ.ಇ ಕಾಯ್ದೆ & ನಿಯಮಗಳಡಿಯಲ್ಲಿ ನೋಂದಣಿ ಪಡೆದು ಪ್ರಮಾಣ ಸಲ್ಲಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ
S R Gorawar 30/4/2022
**(ಶೈಲಾ ಆರ್.ಗೊರವರ)**
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾವೈಪ ಮತ್ತು ಸಮನ್ವಯ)

30/4/22

**ಇವರಿಗೆ:**

1. The Secretary to National Commission for Indian System of Medicine Ministry of AYUSH, Govt of India, No, 61-65, Institutional Area, Janakpuri, D, Block, New Delhi-110058.
2. ಆಯುಕ್ತರು, ಆಯುಷ್ ಇಲಾಖೆ, ಧನ್ವಂತರಿ ರಸ್ತೆ, ಬೆಂಗಳೂರು-09.
3. ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ಮತ್ತು ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಟಿ.ಬ್ಲಾಕ್, ಜಯನಗರ, ಬೆಂಗಳೂರು.
4. ಪ್ರಾಂಶುಪಾಲರು, ಡಾ|| ರವಿ ಪಾಟೀಲ್ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ಹೊನಗ ತಾಲೂಕು, ಬೆಳಗಾವಿ
5. ಶಾಖಾ ರಕ್ಷಾ ಕಡತ

**ಪ್ರತಿಗಳು:**

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು-01.

...3

2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರು.
3. ಸರ್ಕಾರದ ಉಪ ಕಾರ್ಯದರ್ಶಿ-3, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು.